**ಬಂಟ್ವಾಳ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯದಲ್ಲಿ**

ಸಿಸಿ ನಂ. 752/2023

ಫ್ರಾಸಾ : 02

ಚಾಸಾ : 07

| | | |
|---|---|---|
| ಹೆಸರು | : | ಪುನೀತ್ |
| ತಂದೆಯ ಹೆಸರು | : | ದಿ ಕೃಷ್ಣಪ್ಪ ಪೂಜಾರಿ |
| ಪ್ರಾಯ | : | 30 ವರ್ಷ |
| ಉದ್ಯೋಗ | : | ಎಲೆಕ್ಟ್ರಿಷಿಯನ್ |
| ವಾಸಸ್ಥಳ | : | ಕಾಡಬೆಟ್ಟು, ಬಂಟ್ವಾಳ ತಾಲೂಕು |

ದಿಃ **18.07.2025** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಭೋದಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

1. ನನಗೆ ಈ ಕೇಸಿನ ಬಗ್ಗೆ ಯಾವುದೇ ವಿಚರ ಗೊತ್ತಿಲ್ಲ. ನಾನು ಯಾವುದೇ ಅಪಘಾತವನ್ನು ನೋಡಿಲ್ಲ. ಆರೋಪಿಯನ್ನು ನಾನು ನೋಡಿರುವುದಿಲ್ಲ. ಆರೋಪಿ ಗೈರು ಹಾಜರಿದ್ದು, ಆರೋಪಿ ಪರ ವಕೀಲರು ಆರೋಪಿಯನ್ನು ಗುರುತಿಸಲು ತಕರಾರು ಇಲ್ಲ ಎಂದು ವಿನಾಯಿತಿ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಪೊಲೀಸರು ನನ್ನನು ವಿಚಾರಣೆ ಮಾಡಿರುವುದಿಲ್ಲ. ಹಾಗೂ ನಾನು ಪೊಲೀಸರಿಗೆ ಯಾವುದೆ ಹೇಳಿಕೆ ಕೊಟ್ಟಿರುವುದಿಲ್ಲ. ಸಾಕ್ಷಿಗೆ ಕೆಎ–70–ಎಂ–4189 ಸಂಖ್ಯೆಯ ಕಾರು ಇರುವ 4 ಬಾವಚಿತ್ರಗಳನ್ನು ತೋರಿಸಲಾಗಿ ಸಾಕ್ಷಿಯು ಅವುಗಳನ್ನು ನೋಡಿ ಗುರುತಿಸಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎ ಪಿಪಿ ಯವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಎಪಿಪಿಯವರಿಂದಃ –

2. ದಿಃ 16–05–2023 ರಂದು ಸಂಜೆ 7.50 ರ ಸಮಯದಲಿ ಆರೋಪಿ ತನ್ನ ಬಾಬ್ತು ಕೆಎ–70ಎಂ–4189 ನೆ ಸಂಖ್ಯೆಯ ಕಾರನ್ನು ಬೆಳ್ತಂಗಡಿ ಕಡೆಯಿಂದ ಬಿಸಿ ರೋಡು ಕಡೆಗೆ ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ಕಾವಳಪಡೂರು ಗ್ರಾಮದ ಕಾರಿಂಜ ಕ್ರಾಸ್ ನ ಸೆರಾ ಕ್ಲಿನಿಕ್ ಹತ್ತಿರ ರಸ್ತೇಯ ಬದಿಯನಲ್ಲಿ ನಡೆದುಕೂಂಡು ಬರುತ್ತಿದ್ದ ಪಾದಾಚಾರಿ ಸೇಸಮ್ಮ ಎಂಬುವವರ ಹಿಂಭಾಗಕ್ಕೆ ಡಿಕ್ಕಿ ಹೊಡೆದು ಅಪಘಾತಪಡಿಸಿರುತ್ತಾರಳಿ ಎಂದರೆ ನನಗೆ ಗೊತ್ತಿಲ್ಲ. ಸದರಿ ಅಪಘಾತದಿದ ಪರಿಣಾಮ ಸೇಸಮ್ಮ ರವರ ಹಿಂಬದಿ ತಲೆಗೆ ಹಾಗೂ ನೆತ್ತಿಯ ಮೇಲೆ ಜಜ್ಜಿದ ರಕ್ತ ಗಾಯ, ಎಡ ಕೋಲು ಕೈಯಲ್ಲಿ ಸೀಳಿದ ರಕ್ತಗಾಯ, ಬಲ ಮತ್ತು ಎಡ ಕೊಲು ಕೈಯಲ್ಲಿ ಸೀಳಿದ ರಕ್ತಗಾಯ, ಎರಡೂ ಕಾಲುಗಳ ಮೊಣ ಗಂಟಿನಲ್ಲಿ ತರಚಿದ ಗಾಯಗಳಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ನಂತರ ಸದರಿ ಗಾಯಳುವನ್ನು ಬಂಟ್ವಾಳ ಸರ್ಕಾರಿ ಆಸ್ಪತ್ರೆಗೆ ಕರೆ ತಯಿ ಅಲ್ಲಿನ ವೈದ್ಯರು ಪರೀಕ್ಷಿಸಿ ಮೃತಪಟ್ಟಿರುವುದಾಗಿ ತಿಳಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಅಪಘಾತಕ್ಕೆ ಆರೋಪಿಯ ದುಡುಕುತನ ಮತ್ತು ನಿರ್ಲಕ್ಷ್ಯತನದ ಚಾಲನೆಯೇ ಕಾರಣವಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ನಾನು ಅಪಘಾತದ ಸಂದರ್ಬದಲ್ಲಿ ಸ್ಥಳದಲ್ಲಿ ಹಾಜರಿದ್ದು ಅಪಘಾತವನ್ನು ಕಣ್ಣಾರೆ ನೋಡಿರುತ್ತೇನೆ ಎಂದರೆ ಸರಿಯಲ್ಲ.

3. ಈ ಸಂಬಂದ ನಾನು ಪೊಲೀಸರ ಮುಂದೆ ದಿನಾಂಕ 16–05–2023 ರಂದು ನಾನು ಮೇಲಿನ ವಿಳಾಸದಲ್ಲಿ ವಾಸವಾಗಿದ್ದು ಎಲೆಕ್ಟ್ರಿಷಿಯನ್ ಆಗಿ ಕೆಲಸ ಮಾಡಿಕೊಂಡಿರುತ್ತೇನೆ. ದಿನಾಂಕ 07–04–2023 ರಂದು

.........................................................................................................

.......... ಅಪಘಾತಕ್ಕೆ ಕಾರಣವಾದ ಕಾರು ಮತ್ತು ಅದರ ಚಾಲಕಿಯನ್ನು ಅಪಘಾತದ ಸಮಯ ಸರಿಯಾಗಿ ನೋಡಿದ್ದು, ಮುಂದಕ್ಕೆ ನೋಡಿದರೆ ಗುರುತಿಸುತ್ತೇನೆ ಎಂದು ಹೇಳಿಕೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಹೇಳಿಕೆಯ ಸಂಪೂರ್ಣ ಭಾಗವನ್ನು ಓದಿ ಹೇಳಲಾಗಿ ಸಾಕ್ಷಿಯು ಅವುಗಳನ್ನು ಅಲ್ಲಗಳೆದಿರುತ್ತಾರೆ. ಸಾಕ್ಷಿಯು ಅಲ್ಲಗಳೆದ ಭಾಗವನ್ನು ನಿ.ಪಿ. 2 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿತರ ಪರಃ ವಕೀಲರು ಪಾಟಿ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ನನ್ನ ಉಕ್ತಲೇಖನಾ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಲಾಗಿ ಕೇಳಿ ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾಧಂ,
ಬಂಟ್ವಾಳ